**ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ರಾಯಚೂರು-584 101.**

ಸಂಖ್ಯೆ:ಲವಿ5/ಹೊ.ಖಾ.ಕಿ.ಪ್ರಾ.ಶಾ/ಪ್ರಾರಂ/ಅನು/ 14 /2012-13. 1012 ದಿನಾಂಕ:30-04-2012

**ನಮೂನೆ-2**

**ನಿಯಮ 3 ಉಪನಿಯಮ 5(ಬಿ)**

**ಪ್ರಮಾಣ ಪತ್ರ ಸಂಖ್ಯೆ:29**

ಫ್ಯೂಚರ್ ಎಜ್ಯುಕೇಷನ್ & ವೆಲ್‌ಫೇರ್ ಟ್ರಸ್ಟ (ರಿ)ರಾಯಚೂರು ಇವರ ಗವರ್ನಿಂಗ್ ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ 1995) ಸೆಕ್ಷನ್ 31 ರಂತೆ ಈ ದಿನ ದಿನಾಂಕ 30-04-2012 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ)

1. ಕ್ರಮ ಸಂಖ್ಯೆ : 06/2012-13
2. ಶಾಲೆಯ ಹೆಸರು ಫ್ಯೂಚರ್ ಪ್ರಾಥಮಿಕ ಶಾಲೆ ಯರಮರಸ್ ಕ್ಯಾಂಪ್ ತಾ:ರಾಯಚೂರು
3. ಅನುಮತಿ ನೀಡಿದ ತರಗತಿ :1ನೇ ತರಗತಿ, 2ನೇ ತರಗತಿ, 3ನೇ ತರಗತಿ, 4ನೇ ತರಗತಿ, 5ನೇ ತರಗತಿ
4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ:2012-13 2013-14, 2014-15, 2015-16. 2016-17
5. ಅನುಮತಿ ನೀಡಿದ ಮಾಧ್ಯಮ : ಕನ್ನಡ ಮಾಧ್ಯಮ
6. ಶುಲ್ಕ ಪಾವತಿ ಮಾಡಿರುವುದು : ರೂ. 5,000/- ಪಾವತಿ ಮಾಡಿರುವುದು.

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 06/2012-13 ಪುಟ ಸಂಖ್ಯೆ ----- ಸಂಪುಟ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.

1. ಈ ನೋಂದಾವಣೆಯು ನಿಯಮ 2(5) (8) ಕ್ಕೆ ಒಳಪಟ್ಟಿದೆ.
2. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿವರ್ಗ ಕಡ್ಡಾಯವಾಗಿ ಪಾಲಿಸಬೇಕು.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು. ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ: 1 ಆಫ್ 95 ) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು. ಈ ಪ್ರಾಥಮಿಕ ಶಾಲಾ ನೋಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175/ಪಿಎಂಸಿ/95 ದಿ: 07-09-1998 ಮತ್ತು ದಿನಾಂಕ: 29-12-1998 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಈಗ ಅನುಮತಿಸಿರುವ 1 ರಿಂದ 5 ನೇ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲೇ ನಡೆಸತಕ್ಕದ್ದು.
8. ಶಾಲೆಯು ಪ್ರಾರಂಭಿಸಿದ 2 ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಿ ಪ್ರಥಮ ಮಾನ್ಯತೆ ಪಡೆಯತಕ್ಕದ್ದು. ಪ್ರಥಮ ಮಾನ್ಯತೆ ಪಡೆದಲ್ಲಿ ಅಧಿಕೃತ ಶಾಲೆಯಾಗುತ್ತದೆ.

Scanned with CamScanner

9. ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆ ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.
10. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧರಾಗಿರತಕ್ಕದ್ದು.
11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ವಿಭಾಗೀಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧರಾಗಿರತಕ್ಕದ್ದು.
12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ವಿಭಾಗೀಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
13. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರವಾಗಿ ಪಾಲಿಸತಕ್ಕದ್ದು.
14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ರೋಸ್ಟರ ಪ್ರಕಾರ ನಿಯಮಿಸತಕ್ಕದ್ದು.
15. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣಗಳು, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.
17. ಶಾಲಾ ಕೆಲಸದ ವೇಳೆ ಮತ್ತು ದಿನಾಂಕಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
18. ಗವರ್ನಿಂಗ್ ಕೌನ್ಸಿಲ್ ಇವರ ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
19. ವೃತ್ತಿ ತೆರಿಗೆಯನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.
20. ಸರಕಾರಿ ಶಿಕ್ಷಣ ಸಂಸ್ಥೆಗಳಲ್ಲಿನ ಸಂಬಂಧಿಸಿದ ಹುದ್ದೆಗೆ ನಿಗದಿಪಡಿಸಿದ ವೇತನ ಶ್ರೇಣಿಯ ಕನಿಷ್ಠ ವೇತನ (ಮೂಲ ವೇತನ) ಅನುದಾನ ರಹಿತ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳಲ್ಲಿನ ನೌಕರರಿಗೂ ನೀಡತಕ್ಕದ್ದು. ಅದನ್ನು ಅಕೌಂಟ್ ಪೇಯಿ ಚೆಕ್ ಮೂಲಕ ಪಾವತಿ ಮಾಡತಕ್ಕದ್ದು.

ಸ್ಥಳ: ರಾಯಚೂರು
ದಿನಾಂಕ:30-04-2012

ಉಪನಿರ್ದೇಶಕರು (ಆ)
ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು.

ಗೆ,
ಮಾನ್ಯ ಅಧ್ಯಕ್ಷರು/ಕಾರ್ಯದರ್ಶಿಗಳು, ಫೆಡರಲ್ ಎಜ್ಯುಕೇಷನ್ & ವೆಲ್‌ಫೇರ್ ಟ್ರಸ್ಟ (ರಿ) ರಾಯಚೂರು ಇವರಿಗೆ ಅಗತ್ಯ ಅನುಕ್ರಮಕ್ಕಾಗಿ ಒದಗಿಸಿದೆ.

<u>ಪ್ರತಿಗಳು:</u>

1. ಮಾನ್ಯ ಅಪರಾಯುಕ್ತರು. ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ ಇವರಿಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರಾಯಚೂರು ಇವರಿಗೆ ಸಲ್ಲಿಸಿದೆ.
3. ಕ್ಷೇತ್ರ ಶಿಕ್ಷಣಾಧಿಕಾರಿಗಳು, ರಾಯಚೂರು ಇವರ ಮಾಹಿತಿಗಾಗಿ.

ಉಪನಿರ್ದೇಶಕರು (ಆ)
ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು

Scanned with CamScanner

ಕರ್ನಾಟಕ ಸರ್ಕಾರ

**ಅಪರ ಆಯುಕ್ತರ ಕಾರ್ಯಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ ಐವಾನ್-ಇ-ಶಾಹಿ ಬಡಾವಣೆ, ಕಲಬುರಗಿ-585102**

ಸಂಖ್ಯೆ:ಸಿ3(5)/ಪಾಪ್ರಾಶಾ/ಹೊಶಾಪ್ರಾ/116/2015-16

ದಿನಾಂಕ:28-09-2015

**ನಮೂನೆ-4**

**ನಿಯಮ-3 ಉಪನಿಯಮ 7**

**ಪರಿವರ್ತಿತ ನೋಂದಣಿ ಪ್ರಮಾಣ ಪತ್ರ ಸಂಖ್ಯೆ: 202**

**ಫೆಡರಲ್ ಎಜ್ಯುಕೇಷನ್ ಮತ್ತು ವೆಲ್‌ಫೇರ್ ಟ್ರಸ್ಟ್ (ರಿ) ರಾಯಚೂರು** ಇವರ ಗವರ್ನಿಂಗ್ ಕೌನ್ಸಿಲ್ ಸಲ್ಲಿಸಿರುವ ಪ್ರಸ್ತಾವನೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995 ಸೆಕ್ಷನ್ 31 ರಂತೆ ಮತ್ತು karnataka Education Institution (Classification and Registration) Rules 1997 ರ ನಿಯಮ 3ರ ಉಪನಿಯಮ 7 ಈ ಶಿಕ್ಷಣ ಸಂಸ್ಥೆಯ ಅಡಿಯಲ್ಲಿಯ ಕೆಳಗಿನ ತರಗತಿಗಳನ್ನು ನಡೆಸಲು ನೋಂದಾಯಿಸಲಾಗಿದೆ.

| ಕ್ರ.ಸಂ. | ಶಿಕ್ಷಣ ಸಂಸ್ಥೆಯ ವಿವರ | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಅನುಮತಿ ನೀಡಿದ ತರಗತಿಗಳು | ಪ್ರಾರಂಭಿಸಬೇಕಾದ ತರಗತಿಗಳು | ಈಗಾಗಲೇ ನಡೆಯುತ್ತಿರುವ ಮಾಧ್ಯಮ | ಶುಲ್ಕ ಪಾವತಿ ಮಾಡಿರುವುದು |
|---|---|---|---|---|---|---|
| 1 | **ಫೆಡರಲ್ ಎಜ್ಯುಕೇಷನ್ ಮತ್ತು ವೆಲ್‌ಫೇರ್ ಟ್ರಸ್ಟ್ (ರಿ) ರಾಯಚೂರು** | ***ಫೆಡರಲ್ ಪ್ರಾಥಮಿಕ ಶಾಲೆ, ಯರಮರಸ್ ಕ್ಯಾಂಪ್ ತಾ.ರಾಯಚೂರು*** | **1 ರಿಂದ 5ನೇ ತರಗತಿ** | **1 ರಿಂದ 5** | **ಕನ್ನಡ** | **5000/-** |

ಈ ಮೇಲಿನ ಗವರ್ನಿಂಗ್ ಕೌನ್ಸಿಲ್‌ರವರು ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ನಿಯಮ 31 ರ ಉಪನಿಯಮ 5ರಲ್ಲಿ ಶಾಲೆಯನ್ನು ಪರಿವರ್ತಿಸಲು ಸಂಸ್ಥೆಯವರು ಮೇಲೆ ನಮೂದಿಸಿದಂತೆ ನಿಯಮ 31 ರ ಉಪನಿಯಮ 1 ರಂತೆ ಈ ಮೊದಲು ನೋಂದಣಿ ಮಾಡಿದ ಶಾಲೆಯ ವಿವರಗಳನ್ನು ದಾಖಲಿಸಿರುತ್ತಾರೆ ಮತ್ತು ಪ್ರಸ್ತುತ ಈಗಾಗಲೇ ಶಾಲೆ ನೋಂದಣಿ ಮಾಡಿದ ಮೂಲ ನೋಂದಣಿ ಪ್ರಮಾಣ ಪತ್ರವನ್ನು ಉಪನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು ರವರ ನೊಂದಣಿ **ಸಂ:06/2012-2013 ದಿನಾಂಕ:30-04-2012**ರನ್ವಯ ಜಾರಿಗೊಳಿಸಿದ ಪ್ರಮಾಣ ಪತ್ರವನ್ನು ಈ ಮೂಲಕ ಹಿಂಪಡೆದು ರದ್ದುಪಡಿಸಲಾಗಿದೆ ಹಾಗೂ ಈ ಮೊದಲು ಜಾರಿ ಮಾಡಿದ ನೋಂದಣಿ ಪ್ರಾಧಿಕಾರಿಗಳು ತಮ್ಮ ರಜಿಸ್ಟರಿನಲ್ಲಿ ಅವಶ್ಯ ಸೂಕ್ತ ಬದಲಾವಣೆ ಮಾಡತಕ್ಕದ್ದು.

ಪರಿವರ್ತಿತ ನೋಂದಣಿ ಪ್ರಮಾಣ ಪತ್ರವನ್ನು ***ಫೆಡರಲ್ ಎಜ್ಯುಕೇಷನ್ ಮತ್ತು ವೆಲ್‌ಫೇರ್ ಟ್ರಸ್ಟ್ (ರಿ) ರಾಯಚೂರು*** ಇವರಿಗೆ ಈ ಕೆಳಗಿನಂತೆ ತರಗತಿ ನಡೆಸಲು ಅನುಮತಿ ನೀಡಿದೆ.

| ಕ್ರ.ಸಂ. | ಶಿಕ್ಷಣ ಸಂಸ್ಥೆಯ ವಿವರ | ಶುಲ್ಕ ಪಾವತಿಸಿದ ವಿವರ | ಅನುಮತಿ ನೀಡಿದ ತರಗತಿಗಳು | ಶೈಕ್ಷಣಿಕ ವರ್ಷ | ಮಾಧ್ಯಮ |
|---|---|---|---|---|---|
| 1 | ***ಫೆಡರಲ್ ಎಜ್ಯುಕೇಷನ್ ಮತ್ತು ವೆಲ್‌ಫೇರ್ ಟ್ರಸ್ಟ್ (ರಿ) ರಾಯಚೂರು*** | - | **1 ರಿಂದ 5** | **2015-16** | ಆಂಗ್ಲ |

ಸರ್ಕಾರದ ಪತ್ರ ಸಂಖ್ಯೆ: ಇಡಿ 155 ಪಿಜಿಸಿ 2015 ದಿನಾಂಕ:30-03-2015 ರನ್ವಯ 1 ರಿಂದ 5ನೇ ತರಗತಿಯವರೆಗೆ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಕುರಿತು 2015-16ನೇ ಸಾಲಿಗೆ ಅನ್ವಯವಾಗುವಂತೆ ನೋಂದಣಿ ಪ್ರಾಧಿಕಾರಿಯನ್ನಾಗಿ ಅಧಿಕಾರ ಪ್ರತ್ಯಾಯೋಜಿಸಿದ ಹಿನ್ನೆಲೆಯಲ್ಲಿ ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ:**202** ಪುಟ ಸಂಖ್ಯೆ:41 ವ್ಯಾಲ್ಯೂಂ ಸಂಖ್ಯೆ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೋಂದಣಿ) ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

**ಷರತ್ತುಗಳು:-**

1. ನೋಂದಣಿಯು ನಿಯಮ 3(5) (4) ಕ್ಕೆ ಒಳಪಟ್ಟಿರುತ್ತದೆ ಹಾಗೂ ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4)ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
2. ಶಾಲಾ ನಿವೇಶನದ ವಿಸ್ತೀರ್ಣ, ಕಟ್ಟಡ, ಪಾಠೋಪಕರಣಗಳು, ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ಇವರ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.

6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು, ಕರ್ನಾಟಕ ಶಿಕ್ಷಣ ಮಸೂದೆ 1983 (ಆಕ್ಟ 1 ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಸಿ 95 ದಿನಾಂಕ: 07.09.1998 ಮತ್ತು 29.12.1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. (permanently without Aid) ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದೂ ರೂ 20/- ರ ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಹಾಗೂ ಅವುಗಳಿಗೆ ಬದ್ಧರಾಗಿರತಕ್ಕದ್ದು.

9. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮ, ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

10. ಪರಿವರ್ತನೆಗೆ ಅನುಮತಿ ಪಡೆದ 2 ತಿಂಗಳೊಳಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ 1 ಆಫ್ 1995) ರ ಪ್ರಕಾರ ಸೆಕ್ಷನ್ 36 ರಿಂದ 39 ರೀತ್ಯಾ ಹಾಗೂ ಇಡಿ 131 ವಿವಿಧ 98 ಬೆಂಗಳೂರು ದಿನಾಂಕ: 04.11.99 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಗಳಿಗೆ ಮಾನ್ಯತೆಗಾಗಿ ಅರ್ಜಿ ಸಲ್ಲಿಸತಕ್ಕದ್ದು.

11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

14. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

15. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

16. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಹೊಸದಾಗಿ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಯಾದ ಎರಡು ತಿಂಗಳ ಒಳಗಾಗಿ ಶಾಲೆಗೆ ಪ್ರಥಮ ಮಾನ್ಯತೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು. ಒಂದು ವೇಳೆ ಪ್ರಥಮ ಮಾನ್ಯತೆ ಪಡೆಯದೇ ಶಾಲೆ ನಡೆಸಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂತಾನೇ ರದ್ದಾಗುವುದು.

18. ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು.

19. ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಇತರೆ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆಬಾರದಂತೆ ನೋಡಿಕೊಳ್ಳುವುದು.

20. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡುಬಂದಲ್ಲಿ ಯಾವ ಮುನ್ಸೂಚನೆಯನ್ನು ನೀಡದೇ ನೋಂದಣಿಯನ್ನು ರದ್ದುಪಡಿಸಲಾಗುವುದು.

21. ಈ ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.

22. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ಒದಗಿಸುವುದು ಹಾಗೂ ಕುಡಿಯುವ ನೀರು ಸೌಲಭ್ಯ ಒದಗಿಸುವುದು.

23. ಸೇವಾ ಭದ್ರತೆಯಲ್ಲಿ ವಿಧಿಸಿದ ಎಲ್ಲಾ ಷರತ್ತುಗಳನ್ನು ಪೂರೈಸಿದ್ದಲ್ಲಿ ಮಾತ್ರ ಸದರಿ ಶಾಲೆಗೆ ಪ್ರಥಮ ಮಾನ್ಯತೆ ನವೀಕರಣ ಮಾಡತಕ್ಕದ್ದು.

(ರಾಧಾಕೃಷ್ಣರಾವ್ ಮದನ್‌ಕರ್)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ

20/09

ಪ್ರತಿಗಳನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರ ರವರಿಗೆ ಮಾಹಿತಿಗಾಗಿ.
3. ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರ
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಾ. ರಾಯಚೂರ ಜಿ:ರಾಯಚೂರ
5 ಅಧ್ಯಕ್ಷರು/ಕಾರ್ಯದರ್ಶಿಗಳು ಫೆಡರಲ್ ಎಜ್ಯುಕೇಷನ್ ಮತ್ತು ವೆಲ್‌ಫೇರ್ ಟ್ರಸ್ಟ್ (ರಿ) ರಾಯಚೂರು

**ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ರಾಯಚೂರು–584 101.**

ಸಂಖ್ಯೆ:ಲೆವಿ5/ಖಾಪ್ರಾಶಾಲೆ/ಹೊಸ ಪ್ರಾರಂ/ /2016–17 ದಿನಾಂಕ: 31–03–2017

## ನಮೂನೆ–2

## ನಿಯಮ 3 ಉಪನಿಯಮ 5(ಬಿ)

## ಪ್ರಮಾಣ ಪತ್ರ ಸಂಖ್ಯೆ:

**ಫೆಡರಲ್ ಎಜ್ಯುಕೇಷನ್ & ವೆಲ್‌ಫೇರ್ ಟ್ರಸ್ಟ (ರಿ) ಯರಮರಸ್ ಕ್ಯಾಂಪ್ ತಾ:ಜಿ:ರಾಯಚೂರು** ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ 1995)ಸೆಕ್ಷೆನ್ 31 ರಂತೆ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ–2009ರಂತೆ ಈ ದಿನ **31–03–2017** ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣಿಕರಿಸಲಾಗಿದೆ.)

1. **ಕ್ರಮ ಸಂಖ್ಯೆ** : 13/2017–18
2. **ಶಾಲೆಯ ಹೆಸರು** : ಫೆಡರಲ್ ಹಿರಿಯ ಪ್ರಾಥಮಿಕ ಶಾಲೆ ಯರಮರಸ್ ಕ್ಯಾಂಪ್ ತಾ:ಜಿ:ರಾಯಚೂರು
3. **ಅನುಮತಿ ನೀಡಿದ ತರಗತಿ** : 6ನೇ, 7ನೇ, 8ನೇ ತರಗತಿ
4. **ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ** : 2017–18, 2018–19, 2019–20,
5. **ಅನುಮತಿ ನೀಡಿದ ಮಾಧ್ಯಮ** : ಆಂಗ್ಲ ಮಾಧ್ಯಮ

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ **13/2017–18**ಪುಟ ಸಂಖ್ಯೆ ..........ಸಂಪುಟ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ಪ್ರಮಾಣ ಪತ್ರವನ್ನು **ಸರಕಾರಿ ಆದೇಶ ಸಂಖ್ಯೆ: ಇಡಿ 549 ಪಿಜಿಸಿ 2015 ದಿನಾಂಕ: 02–11–2015ರ ಪ್ರಕಾರ** ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮತಿ ನೀಡಲಾಗಿದೆ.

1. ಈ ನೋಂದಾವಣೆಯು ನಿಯಮ 2(5) (8) ಕ್ಕೆ ಒಳಪಟ್ಟಿದೆ.
2. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿವರ್ಗ ಕಡ್ಡಾಯವಾಗಿ ಪಾಲಿಸಬೇಕು.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು. ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ: 1 ಆಫ್ 95 ) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು. ಈ ಪ್ರಾಥಮಿಕ ಶಾಲಾ ನೋಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 549 ಪಿಜಿಸಿ 2015 ದಿನಾಂಕ: 02–11–2015ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣಿಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಈಗ ಅನುಮತಿಸಿರುವಂತೆ 6 ರಿಂದ 8ನೇ ತರಗತಿಗೆ **ಆಂಗ್ಲ** ಮಾಧ್ಯಮದಲ್ಲೇ ನಡೆಸತಕ್ಕದ್ದು.
8. ಶಾಲೆಯು ಪ್ರಾರಂಭಿಸಿದ 2 ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಪ್ರಸ್ತಾವನೆಯನ್ನು ಸಲ್ಲಿಸಿ ಪ್ರಥಮ ಮಾನ್ಯತೆ ಪಡೆಯತಕ್ಕದ್ದು. ಪ್ರಥಮ ಮಾನ್ಯತೆ ಪಡೆದಲ್ಲಿ ಅಧಿಕೃತ ಶಾಲೆಯಾಗುತ್ತದೆ.

9. ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆ ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.
10. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧರಾಗಿರತಕ್ಕದ್ದು.
11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಂಟಿ ಖಾತೆಯಲ್ಲಿ ಇಡತಕ್ಕದ್ದು.
12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
13. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರವಾಗಿ ಪಾಲಿಸತಕ್ಕದ್ದು.
14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ರೋಸ್ಟರ ಪ್ರಕಾರ ನಿಯಮಿಸತಕ್ಕದ್ದು.
15. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣಗಳು, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.
17. ಶಾಲಾ ಕೆಲಸದ ವೇಳೆ ಮತ್ತು ದಿನಾಂಕಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
18. ಗವರ್ನಿಂಗ್ ಕೌನ್ಸಿಲ್ ಇವರ ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
19. ವೃತ್ತಿ ತೆರಿಗೆಯನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.
20. ಸರಕಾರಿ ಶಿಕ್ಷಣ ಸಂಸ್ಥೆಗಳಲ್ಲಿನ ಸಂಬಂದಿಸಿದ ಹುದ್ದೆಗೆ ನಿಗದಿಪಡಿಸಿದ ವೇತನ ಶ್ರೇಣಿಯ ಕನಿಷ್ಠ ವೇತನ (ಮೂಲ ವೇತನ) ಅನುದಾನ ರಹಿತ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳಲ್ಲಿನ ನೌಕರರಿಗೂ ನೀಡತಕ್ಕದ್ದು. ಅದನ್ನು ಅಕೌಂಟ್ ಪೇಯಿ ಚೆಕ್ ಮೂಲಕ ಪಾವತಿ ಮಾಡತಕ್ಕದ್ದು.
21. ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ (ಆರ್.ಟಿ.ಇ) ನಿಯಮಗಳನ್ನು ಪಾಲಿಸತಕ್ಕದ್ದು.
22. ಸದರಿ ವಿಷಯದಲ್ಲಿ ಯಾವುದೇ ಶಾಲೆಯಿಂದ ಆಕ್ಷೇಪಣೆ ಬಂದರೆ ಹಾಗೂ ತಪ್ಪು ಮಾಹಿತಿ ಸಲ್ಲಿಸಿದ್ದು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ಇಲಾಖೆ ಕೊಟ್ಟ ಅನುಮತಿಯನ್ನು ಹಿಂದಕ್ಕೆ ಪಡೆಯಲಾಗುವುದು.
23. ತಮ್ಮ ಶಾಲೆಯ ಡೈಸ್ ಸಂಖ್ಯೆಯನ್ನು ಎಸ್.ಎಸ್.ಎ ಪ್ರೋಗ್ರಾಮರ್ ಇವರಿಂದ ಪಡೆದುಕೊಳ್ಳತಕ್ಕದ್ದು.

ಉಪನಿರ್ದೇಶಕರು (ಆ)
ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು.

ಗೆ,
ಅಧ್ಯಕ್ಷರು/ಕಾರ್ಯದರ್ಶಿಗಳು **ಫೆಡರಲ್ ಎಜ್ಯುಕೇಷನ್ & ವೆಲ್‌ಫೇರ್ ಟ್ರಸ್ಟ (ರಿ) ಯರಮರಸ್ ಕ್ಯಾಂಪ್ ತಾ:ಜಿ:ರಾಯಚೂರು** ಇವರಿಗೆ ರವಾನಿಸಿದೆ.

**ಪ್ರತಿಗಳು:**

1. ಮಾನ್ಯ ಅಪರಾಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ ಇವರಿಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರಾಯಚೂರು ಇವರಿಗೆ ಸಲ್ಲಿಸಿದೆ.
3. ಕ್ಷೇತ್ರ ಶಿಕ್ಷಣಾಧಿಕಾರಿಗಳು **ರಾಯಚೂರು** ರವರಿಗೆ ಒದಗಿಸಿದೆ.

ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಅಪರ ಆಯುಕ್ತರ ಕಛೇರಿ, ಕಲ್ಬುರ್ಗಿ ವಿಭಾಗ, ಕಲ್ಬುರ್ಗಿ ಜಿಲ್ಲೆ.

ಮಂಜೂರಾತಿ ನೀಡಿದ ಕಛೇರಿ ವಿಳಾಸ: 4(6) ಅ.ಆ.ಪ್ರ.ಶಾ.ಶ್ರೆ.ಶಾ.ಶಾ 02/20-21 ದಿನಾಂಕ: 24-Sep-2020

[ನಿಯಮ 3 ಉಪನಿಯಮ 5(ಬಿ)]

996

ಪ್ರಮಾಣ ಪತ್ರ ಸಂಖ್ಯೆ: 26712/2020-21

17 SEP 2020

**FEDERAL HIGH SCHOOL YERAMARUS CAMP RAICHUR ( # 13-2-323/1/1 OPP IRRIGATION IB YERAMARUS CAMP RAICHUR 584135 )**

**FEDERAL EDUCATION AND WELFARE TRUST RAICHUR** ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸಕ್ಷನ್ 31ರಂತೆ ಈ ಕೆಳಕಂಡ EDUCATION PURPOSE... ಪ್ರೌಢ (9 ರಿಂದ 10) (Secondary) ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1. ಅರ್ಜಿ ಸಂಖ್ಯೆ : **200329**

2. ಕ್ರಮ ಸಂಖ್ಯೆ : **26712**

3. ಶಾಲೆಯ ಹೆಸರು ಮತ್ತು ವಿಳಾಸ : **FEDERAL HIGH SCHOOL YERAMARUS CAMP RAICHUR ( # 13-2-323/1/1 OPP IRRIGATION IB YERAMARUS CAMP RAICHUR 584135 )**

4. ಅನುಮತಿ ನೀಡಿದ ತರಗತಿ : **Secondary**

5. ಶೈಕ್ಷಣಿಕ ವರ್ಷ : **2020-21**

6 ಅನುಮತಿ ನೀಡಿದ ಮಾಧ್ಯಮ : **English**

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : **10/87/03**

ಷರತ್ತುಗಳು

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
6. ಈ ಪ್ರೌಢಶಾಲಾ ನೊಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

ಮುಂದುವರೆದಿದೆ...

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

**Remark : As per DDPI recommendation**

ಅಪರ ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲ್ಬುರ್ಗಿ ವಿಭಾಗ, ಕಲ್ಬುರ್ಗಿಜಿಲ್ಲೆ.

1. ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.

**RAICHUR**

ಜಿಲ್ಲೆ.

2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.

**RAICHUR**

ತಾಲ್ಲೂಕು.

3. ಕಾರ್ಯದರ್ಶಿಗಳು FEDERAL HIGH SCHOOL YERAMARUS CAMP RAICHUR (# 13-2-323/1/1 OPP IRRIGATION II YERAMARUS CAMP RAICHUR 584135)

4. ಕಛೇರಿ ಪ್ರತಿ.

## ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ರಾಯಚೂರು.

ಸಂಖ್ಯೆ: ಜಿ2/ಖಾಪ್ರೌಶಾ/ಮಾ.ನವೀ/109/2021-22 ದಿನಾಂಕ: 26-11-2021

**ನಮೂನೆ – 5**

**ಮಾನ್ಯತೆ ನವೀಕರಣ ಆದೇಶ**

1. ನೋಂದಣಿ ಸಂಖ್ಯೆ : 26712/2020-21
2. ಗವರ್ನಿಂಗ್ ಕೌನ್ಸಿಲ್ : ಫೆಡರಲ್ ಎಜುಕೇಷನ್ & ವೇಲ್‌ಫೇರ್ ಟ್ರಸ್ಟ್, ರಾಯಚೂರು ಜಿ॥ ರಾಯಚೂರು.
3. ಶಾಲೆಯ ಹೆಸರು/ವಿಳಾಸ : ಫೆಡರಲ್ ಪ್ರೌಢ ಶಾಲೆ, ಯರಮರಸ್ ರಾಯಚೂರು.
4. ಶಿಕ್ಷಣ ಸಂಸ್ಥೆಯ (ಶಾಲೆ) ವರ್ಗ ದರ್ಜೆ : 9 ಮತ್ತು 10 ನೇ ತರಗತಿಗೆ 2021-22ನೇ ಸಾಲಿಗೆ ಮಾನ್ಯತೆ ನವೀಕರಣ ನೀಡಿದೆ.
5. ಮಾಧ್ಯಮ : ಆಂಗ್ಲ ಮಾಧ್ಯಮ
6. ಷರತ್ತುಗಳನ್ನು ಪೂರೈಸಲು ನೀಡಲಾದ ಸಮಯ : ಮುಂದಿನ ಶೈಕ್ಷಣಿಕ ವರ್ಷದೊಳಗೆ ಪೂರೈಸತಕ್ಕದ್ದು.

ಈ ಕೆಳಕಾಣಿಸಿದ ಷರತ್ತುಗಳಿಗೆ ಒಳಪಟ್ಟು 2021-22ನೇ ಸಾಲಿಗೆ ಮಾತ್ರ ಮಾನ್ಯತೆ ನವೀಕರಣ ನೀಡಲಾಗಿದೆ.

1. ಸ್ವಂತ ಶಾಲೆ ಕಟ್ಟಡವನ್ನು ನಿರ್ವಹಿಸಬೇಕು
2. ಮಕ್ಕಳ ಸಂಖ್ಯೆ ಪ್ರತಿ ತರಗತಿಯಲ್ಲಿ ಕನಿಷ್ಠ 30 ಗರಿಷ್ಟ 70 ದಾಖಲಾತಿ ಹಾಗೂ ಕನಿಷ್ಠ 25, ಹಾಜರಾತಿ ಇರಬೇಕು.
3. ಶಾಲಾ ಮಕ್ಕಳಿಗೆ ಆಟದ ಮೈದಾನ ಒದಗಿಸುವುದು.
4. ಇಲಾಖೆಯಿಂದ ನಿಗದಿಪಡಿಸಿದ ಫೀ ದರಗಳಷ್ಟೇ ವಿದ್ಯಾರ್ಥಿಗಳಿಂದ ವಸೂಲಿ ಮಾಡಬೇಕು. ಯಾವುದೇ ಕಾರಣಕ್ಕೂ ಹೆಚ್ಚಿನ ವಸೂಲಿ ಮಾಡಬಾರದು.
5. ಎಲ್ಲಾ ಮಕ್ಕಳಿಗೂ ಮೀಸಲಾತಿ ಅನ್ವಯ ದಾಖಿತಿಗೆ ಅವಕಾಶ ನೀಡಬೇಕು.
6. ಎಲ್ಲಾ ತರಗತಿಗಳಲ್ಲಿ ಮಕ್ಕಳ ಸಂಖ್ಯೆಯನ್ನು ಹೆಚ್ಚಿಸಬೇಕು.
7. ತರಬೇತಿ ಹೊಂದಿರುವ ಶಿಕ್ಷಕರನ್ನು ಹಾಗೂ ನಿಯಮಾನುಸಾರವಾಗಿ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನೇ ನೇಮಕಾತಿ ಮಾಡತಕ್ಕದ್ದು ಮತ್ತು ನೇಮಕಾತಿ ಮಾಡಿಕೊಳ್ಳುವಾಗ ಮೀಸಲಾತಿಯನ್ನು ಕಡ್ಡಾಯವಾಗಿ ಪಾಲಿಸುವುದು.
8. ಪ್ರತಿ ವರ್ಷ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ/ಶಿಕ್ಷಕರ ಕಲ್ಯಾಣ ನಿಧಿ ಹಾಗೂ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ನಿಧಿಗಳನ್ನು ಸರಕಾರಕ್ಕೆ ತಪ್ಪದೇ ಪಾವತಿಸುವುದು.
9. ನಿಯಮಾನುಸಾರ ಶಿಕ್ಷಕ ಸಿಬ್ಬಂದಿಗಳಿಗೆ ಸೇವಾ ಸೌಲಭ್ಯ ಒದಗಿಸಬೇಕು ಬ್ಯಾಂಕ್ ಮುಖಾಂತರ ವೇತನ ಪಾವತಿಸಬೇಕು ಹಾಗೂ ಮೂಲಭೂತ ಸೌಲಭ್ಯಗಳನ್ನು ಪೂರೈಸಬೇಕು.

ಉಪನಿರ್ದೇಶಕರು (ಆ),
ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು.

ಗೆ,
ಮುಖ್ಯೋಪಾಧ್ಯಾಯರು,
ಫೆಡರಲ್ ಪ್ರೌಢ ಶಾಲೆ, ಯರಮರಸ್ ರಾಯಚೂರು.
ತಾ॥ ರಾಯಚೂರು ಜಿ॥ ರಾಯಚೂರು

**ಇದರ ಪ್ರತಿಯನ್ನು ಮಾಹಿತಿಗಾಗಿ:**

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, **ರಾಯಚೂರು** ಇವರ ಮಾಹಿತಿಗಾಗಿ.

OFFICE OR THE DEUTY DIRECTOR OF SCHOOL EDUCATION
RAICHUR

No.G1(2)/Change of name/Bada.ku/2023-24 Dated 29-04-2024

OFFICIAL MEMORANDUM

Sub: Name change of Private/un-aided Primary & High Schools –reg

Ref: 1. Office Memo No.EP 46/PGC 23 by Under secretary to Govt. Dept. of School Education & Literacy (Primary) Bangaluru. dated 07-02-2023.

2. Memo No.E-1035 161/DPI-CPIOC7-2(USM)3/Grant-in-aid from the Hon'ble Commissioner Dept. of School Edcuation Bangalure dt. 16-03-2023.

3. Field Education officer Raichur, letter dated 29-04-2024.

**Preamble**:

As referred in the subject and reference above and as requested by the Federal Educational and Welfare Trust (Reg) Yermarus camp Dist. Raichur who have been permitted and are running schools in the same compound under the name Federal Primary and Higher Primary schools at Yermarus camp Dist.Raichur under Sec.31 of the Karnataka Education Act 1983 (Karnataka Act-1 1955) vide dated 30-04-2012 for Class-I to 5, for primary school, and for class 6 to 8 vide letter dated 31-03-2017, and for Class 9 to 10 vide letter dt. 07-09-2020. They have requested to change the name as **"Federal Public School Yermarus camp Tq.Dist. Raichur"** vide reference 3 above. As per Govt. memo one time such request for change of name may be allowed. After reviewing the proposal in detail, the order is as below;

ORDER

After taking into consideration the proposal referred in the preamble and GO at Ref.1 dated 07-02-2023, the Federal Education and Welfare Trust (Regd) Yermarus camp Dist. Raichur, under which Federal primary, Higher primary and High schools are running at Yermarus camp Dist. Raichur, is permitted to change the name of their School as **"Federal Poublic School"** at Yermarus camp Tq. And Dist. Raichur subject to the following conditions;

1. All future correspondence of this school should be addressed tasFederal Public School, Yermarus camp. Tq.and Dist. Raichur.
2. All the conditions referred in the Govt. office memorandum at Ref-2 shall be strictly complied with.

...2.

GOVT. OF KARNATAKA ★ NOTARY, RAICHUR ★ PATIL CHANDRAMOULI. B. No.Law LCL/162/2021 Valid up to 29-10-2026

29/4/2024

PATIL CHANDRAMOULI. B.
ADVOCATE & NOTARY, RAICHUR

SHABBIR AHMED B.Com.,LL.B.(Spl)
Regd. No. KAR/873 ADVOCATE
RAICHUR.

3. After change of name of the School the accreditation should be renewed in the name of the new school, and appropriate change in the software of the department should be submitted to the concerned authorities.
4. No further change of name is considered. This is the final order.
5. In case of any dispute regarding change of name the School Management is directly responsible for it.
6. The new name of the school shall be registered under the Registration rules of Education Act.
7. Before implementing this order Field Education Officer's should check the School permission and other important documents with original copies to know the correctness before implementing the order. In case of any discrepancy they should submit a report before implementing this order.

Sd/-
K.D.Badigar
Dy.Director(A)
School Education Deptt.
Raichur.

To
Chairman/Secretary,
Federal Educatioal & Welfare Trust®
Yermarus camp Tq.Dist. Raichur.

Copy to:
1. The Jt.Director, School Education Department Kalaburagi for kind information.
2. Field Education Officer, Raichur for necessary action.
3. Chairman/Secretary Federal Educational & Welfare Trust ® Yermarus camp Tq.and Dist. Raichur for information.

Certificate:
*This is to certify that, I have translated the above matter from Kannada to English, as I have studied and know Kannada / English languages, and hence I did it to the best of my knowledge.*

GOVT. OF KARNATAKA ★ NOTARY, RAICHUR ★ PATIL CHANDRAMOULI. B. No.Law LCL/162/2021. Valid up to 29-10-2026

29/4/2024
PATIL CHANDRAMOULI. B.
ADVOCATE & NOTARY, RAICHUR

*Shabbir Ahmed*
*Advocate*
*Reg.No.KAR/873/08*
*Raichur.*

SHABBIR AHMED B.Com.,LL.B.(Spl)
ADVOCATE
KAR/873
RAICHUR.

## ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರವರ ಕಛೇರಿ,ರಾಯಚೂರು.

ಸಂಖ್ಯೆ:ಜಿ1(2)/ಖಾಪ್ರಾಪ್ರೌಶಾ/ಹೆಸರು/ಬದ.ಕು/02/2023-24 ದಿನಾಂಕ: 29-04-2024

### ಅಧಿಕೃತ ಜ್ಞಾಪನ

**ವಿಷಯ**: ಖಾಸಗಿ ಅನುದಾನಿತ/ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಹೆಸರನ್ನು ಬದಲಾಯಿಸುವ ಬಗ್ಗೆ.

ಉಲ್ಲೇಖ:
1. ಮಾನ್ಯ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ, (ಪ್ರಾಥಮಿಕ) ಬೆಂಗಳೂರು ರವರ ಅಧಿಕೃತ ಜ್ಞಾಪನಾ ಸಂಖ್ಯೆ:ಇಪಿ 46 ಪಿಜಿಸಿ 2023 ದಿನಾಂಕ: 07-02-2023.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರ ಜ್ಞಾಪನಾ ಸಂಖ್ಯೆ: E-1035161 DPI-CPIOC7-2(USM)/3/GRANT IN AID SEC ದಿನಾಂಕ: 16-03-2023.
3. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ರಾಯಚೂರು ರವರ ಪತ್ರ ದಿನಾಂಕ: 29-04-2024

****()*****

**ಪ್ರಸ್ತಾವನೆ.**

ಮೇಲಿನ ವಿಷಯ ಹಾಗೂ ಉಲ್ಲೇಖದನ್ವಯ ಫೆಡರಲ್ ಎಜುಕೇಶನಲ್ ಅಂಡ್ ವೆಲ್‌ಫೇರ್ ಟ್ರಸ್ಟ್ (ರಿ) ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಇದರ ಅಡಿಯಲ್ಲಿ ಫೆಡರಲ್ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆ, ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಶಾಲೆಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995) ಸೆಕ್ಷನ್ 31 ರಂತೆ ದಿನಾಂಕ: 30-04-2012 ರಂದು 1 ರಿಂದ 5 ನೇ ತರಗತಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ ದಿನಾಂಕ: 31-03-2017 6 ರಿಂದ 8 ನೇ ತರಗತಿ ಮತ್ತು ದಿನಾಂಕ: 07-09-2020 ರಂದು 9 ರಿಂದ 10 ನೇ ತರಗತಗಳಿಗೆ ಶಾಲೆಯನ್ನು ಪ್ರಾರಂಭಿಸಲು ಅನುಮತಿ ಪಡೆದಿದ್ದು, ಈ ಶಾಲೆಯು ಒಂದೇ ಕಂಪೌಂಡ್‌ನಲ್ಲಿ ನಡೆಯುತ್ತಿದ್ದು ಈ ಶಾಲೆಯ ಹೆಸರನ್ನು "ಫೆಡರಲ್ ಪಬ್ಲಿಕ್ ಸ್ಕೂಲ್, ಯರಮರಸ್ ಕ್ಯಾಂಪ್" ತಾ: ಜಿ: ರಾಯಚೂರು ಎಂದು ಬದಲಾವಣೆ ಮಾಡಿ ಕೊಡುವಂತೆ ಕೋರಿ ಉಲ್ಲೇಖ-3 ರಲ್ಲಿ ವಿನಂತಿಸಿದ್ದು, ಸರ್ಕಾರದ ಅಧಿಕೃತ ಜ್ಞಾಪನಾದಂತೆ ಒಂದು ಬಾರಿಗೆ ಕೋರಿಕೆ ಮೇರೆಗೆ ಹೆಸರು ಮಾತ್ರ ಬದಲಾವಣೆ ಮಾಡಲು ಅವಕಾಶವಿದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶ

**ಆದೇಶ**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ, ಉಲ್ಲೇಖ-1 ರಲ್ಲಿನ ಸರ್ಕಾರದ ಅಧಿಕೃತ ಜ್ಞಾಪನಾ ದಿನಾಂಕ: 07-02-2023 ರನ್ವಯ ಫೆಡರಲ್ ಎಜುಕೇಶನಲ್ ಅಂಡ್ ವೆಲ್‌ಫೇರ್ ಟ್ರಸ್ಟ್ (ರಿ) ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಇದರ ಅಡಿಯಲ್ಲಿ ನಡೆಯುತ್ತಿರುವ ಫೆಡರಲ್ ಕಿರಿಯ, ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಈ ಶಾಲೆಯ ಹೆಸರನ್ನು "FEDERAL PUBLIC SCHOOL YARAMARUS CAMP TALUK & DIST: RAICHUR" ಈ ಶಾಲೆ 1 ರಿಂದ 10 ನೇ ತರಗತಿಗೆ ಹೆಸರು ಬದಲಾವಣೆ ಮಾಡಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

**ಷರತ್ತುಗಳು:-**

1. ಈ ಶಾಲೆಯಲ್ಲಿ ಮುಂದಿನ ಎಲ್ಲಾ ಪತ್ರ ವ್ಯವಹಾರವನ್ನು ಫೆಡರಲ್ ಪಬ್ಲಿಕ್ ಸ್ಕೂಲ್, ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಎಂದು ವ್ಯವಹರಿಸತಕ್ಕದ್ದು.
2. ಉಲ್ಲೇಖ-2ರ ಸರ್ಕಾರದ ಅಧಿಕೃತ ಜ್ಞಾಪನಾದಲ್ಲಿನ ಎಲ್ಲಾ ಷರತ್ತುಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು.
3. ಶಾಲೆಯ ಹೆಸರು ಬದಲಾವಣೆಗೊಂಡ ನಂತರ ಹೊಸ ಶಾಲೆಯ ಹೆಸರಲ್ಲಿ ಮಾನ್ಯತೆ ನವೀಕರಣ ಮಾಡಿಕೊಳ್ಳತಕ್ಕದ್ದು. ಹಾಗೂ ಇಲಾಖೆಯ ತಂತ್ರಾಂಶದಲ್ಲಿ ಸೂಕ್ತ ಬದಲಾವಣೆಗೆ ಸಂಬಂಧಿಸಿದ ಪ್ರಾಧಿಕಾರಗಳಿಗೆ ಮನವಿ ಸಲ್ಲಿಸಿ ಬದಲಾಯಿಸಿಕೊಳ್ಳತಕ್ಕದ್ದು.
4. ಹೆಸರು ಬದಲಾವಣೆ ಬಗ್ಗೆ ಮತ್ತೊಮ್ಮೆ ಪರಿಶೀಲಿಸಲು ಅವಕಾಶವಿಲ್ಲ. ಇದು ಅಂತಿಮ ಆದೇಶವಾಗಿರುತ್ತದೆ.
5. ಈ ಹೆಸರು ಬದಲಾವಣೆ ಬಗ್ಗೆ ಯಾವುದೇ ವಿವಾದ ಉಂಟಾದಲ್ಲಿ ಇದಕ್ಕೆ ಆಡಳಿತ ಮಂಡಳಿಯೇ ನೇರ ಹೊಣೆಗಾರರಾಗಿರುತ್ತಾರೆ.

6. ಶಾಲೆಯ ಹೊಸ ಹೆಸರನ್ನು ಶಿಕ್ಷಣ ಕಾಯ್ದೆಯಡಿಲ್ಲಿನ ನೋಂದಾಣಿ ನಿಯಮಗಳಡಿಯಲ್ಲಿ ನೋಂದಣಿ ಮಾಡತಕ್ಕದ್ದು.
7. ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರು ಪ್ರಸ್ತುತ್ತ ಆದೇಶ ಜಾರಿ ಮಾಡುವ ಪೂರ್ವದಲ್ಲಿ ಶಾಲಾ ಅನುಮತಿ ಇತರೆ ಪ್ರಮುಖ ದಾಖಲೆಗಳನ್ನು ಮೂಲ ಪ್ರತಿಗಳೊಂದಿಗೆ ತಾಳೆನೋಡಿ ಸರಿ ಇದ್ದಲ್ಲಿ ಜಾರಿಗೆ ತರುವುದು ಏನಾದರೂ ವ್ಯತ್ಯಾಸವಿದ್ದಲ್ಲಿ ಈ ಆದೇಶ ಜಾರಿಗೆ ತರದೆ ವರದಿ ಸಲ್ಲಿಸುವುದು.

(ಕೆ ಡಿ ಬಡಿಗೇರ್)
ಉಪನಿರ್ದೇಶಕರು (ಆ)
ಶಾಲಾ ಶಿಕ್ಷಣ ಇಲಾಖೆ ರಾಯಚೂರು

ಗೆ,
ಅಧ್ಯಕ್ಷರು/ಕಾರ್ಯದರ್ಶಿಗಳು,
ಫೆಡರಲ್ ಎಜುಕೇಶನಲ್ ಅಂಡ್ ವೆಲ್‌ಫೇರ್ ಟ್ರಸ್ಟ್ (ರಿ)
ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು

ಪ್ರತಿಯನ್ನು:
1. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಇವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು ರಾಯಚೂರು ಇವರ ಸೂಕ್ತಕ್ರಮಕ್ಕಾಗಿ.
3. ಅಧ್ಯಕ್ಷರು/ಕಾರ್ಯದರ್ಶಿಗಳು ಫೆಡರಲ್ ಎಜುಕೇಶನಲ್ ಅಂಡ್ ವೆಲ್‌ಫೇರ್ ಟ್ರಸ್ಟ್ (ರಿ) ಯರಮರಸ್ ಕ್ಯಾಂಪ್ ತಾ: ಜಿ: ರಾಯಚೂರು ಇವರ ಮಾಹಿತಿಗಾಗಿ.

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,

RAICHUR ಜಿಲ್ಲೆ.

ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಪ್ರಮಾಣ ಪತ್ರ

ಸಂಖ್ಯೆ: 26000 12259

ದಿನಾಂಕ: 25-Aug-2022

ವಿಷಯ: ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ FEDERAL EDUCATION AND WELFARE TRUST RAICHUR ಆಡಳಿತ ಮಂಡಳಿಯು 29060719409 ಡೈಸ್ ಕೋಡ್ ಸಂಖ್ಯೆ FEDERAL PUBLIC SCHOOL YERAMARAS CAMP,RCR-YERAMARAS CAMP ಶಾಲೆಗೆ [ವಿಳಾಸ], 1 - 10 ತರಗತಿವರೆಗೆ Kannada,English ಮಾಧ್ಯಮ Renewal Recognition ಶಾಲಾ [ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ] ಮಾನ್ಯತೆಯನ್ನು ನವೀಕರಿಸಲು ಆನ್‌ಲೈನ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ಇಲಾಖೆಯ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ, 01-Jun-2022 ಸಾಲಿನಿಂದ 31-May-2027 ಸಾಲಿನವರೆಗೆ ಈ ಕೆಳಕಂಡ ಷರತ್ತುಗಳೊಂದಿಗೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ | ವಿವರ | ಆನ್ಲೈನ್ ಅರ್ಜಿ ಸಂಖ್ಯೆ :- 26000 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | FEDERAL EDUCATION AND WELFARE TRUST RAICHUR |
| 2 | ಶಾಲೆಯ ಹೆಸರು ಮತ್ತು ವಿಳಾಸ | FEDERAL PUBLIC SCHOOL YERAMARAS CAMP,RCR-YERAMARAS CAMP |
| 3 | ಡೈಸ್ ಕೋಡ್ ಸಂಖ್ಯೆ: | 29060719409 |
| 4 | ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಮಾಡಿದ ಶೈಕ್ಷಣಿಕ ಸಾಲು (ಅವಧಿ) | 2022-2023 ಸಾಲಿನಿಂದ 2026-2027 ರವರೆಗೆ |
| 5 | ತರಗತಿ/ ವಿಭಾಗ/ ಮಾಧ್ಯಮ1 ರಿಂದ 5, 1 ರಿಂದ 8, 6 ರಿಂದ 8, (1 ರಿಂದ 10 ಅಥವಾ 9 ಮತ್ತು 10 ತರಗತಿಗಳು) | ತರಗತಿ : 9 to 10<br>ತಲಾ ವಿಭಾಗಗಳು : 2<br>ಮಾಧ್ಯಮ : Kannada,English |
| 6 | ಶಾಲೆಯನ್ನು ಅನುದಾನ ಸಹಿತ/ ಅನುದಾನ ರಹಿತ ವಾಗಿ ಪ್ರಥಮ ಮಾನ್ಯತೆ ಮಾನ್ಯತೆ ನವೀಕರಣ ನೀಡಿದ | Pvt. Unaided / Renewal Recognition |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿದ್ದು, ನೋಂದಾಯಿಸಿದ ಶಾಲೆಯ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. [ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ] 1to 5th [1 ರಿಂದ 5, 1 ರಿಂದ 8, 6 ರಿಂದ 8, 9 ಮತ್ತು 10 ಹಾಗೂ 1 ರಿಂದ 10] ಈ ಶಾಲೆಗಳ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.
2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.
3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿರಿಸುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ-ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.
4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರದಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಛೆಯಿಂದ ನೀಡುವ ಡೊನೇಷನ್‌ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.
7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.
8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

   (i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

   (ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ-21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (PF)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ESI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್-24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ-17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ಪಿಚಾರಕ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್‌ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ಪ್ರಾಧಿಕಾರದ ಪಠ್ಯಕ್ರಮ ಮತ್ತು ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳು ಸೆಕ್ಷನ್-19ರಲ್ಲಿ ಸೂಚಿಸದಂತೆ ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳಿಗೆ ಅನುಗುಣವಾಗಿ ಶಾಲೆಯು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುವುದು.

13. ಸೆಕ್ಷನ್-19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

14. ಶಾಲೆಯ ಆವರಣದಲ್ಲಿ ಅಥವಾ ಹೊರಗೆ ಅನಧಿಕೃತವಾಗಿ ತರಗತಿ / ವಿಭಾಗಗಳನ್ನು (ಬ್ರಾಂಚ್) ತೆರಯಬಾರದು.

15. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

16. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

17. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್‌ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

18. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ-2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

19. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

20. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

21. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್‌ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್‌ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

RAICHUR(2906) ಜಿಲ್ಲೆ

1. ಸಂಬಂಧಿಸಿದ ಆಡಳಿತ ಮಂಡಳಿ FEDERAL EDUCATION AND WELFARE TRUST RAICHUR

2. ಮುಖ್ಯ ಶಿಕ್ಷಕರು, / YERAMARAS CAMP / FEDERAL PUBLIC SCHOOL YERAMARAS CAMP,RCR

3. ಕ್ಷೇತ್ರ ಶಿಕ್ಷಣಾಧಿಕಾರಿಗಳು, RAICHUR(290607) ತಾಲ್ಲೂಕು/ವಲಯ RAICHUR(2906) ಜಿಲ್ಲೆ.

4. ಕಛೇರಿ ಪ್ರತಿ.